## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ ಅಲ್ಪಸಂಖ್ಯಾತರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತರ ಸಂಸ್ಥೆಗಳನ್ನಾಗಿ ಘೋಷಿಸಲು ಇರುವ ನಿಯಮ/ಆದೇಶಗಳನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಇಡಿ 27 ಮಾಹಿತಿ 2012 (ಭಾಗ-1), ದಿನಾಂಕ:18.06.2014.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 156 ಯುಪಿಸಿ 2013, ದಿನಾಂಕ:30.07.2014.
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 131 ಟಿಪಿಇ 2014, ದಿನಾಂಕ: 20.08.2014.
4. ಸರ್ಕಾರದ ಅಧಿಸೂಚನೆ ಸಂಖ್ಯೆ:ಎಸ್‌ಡಿಇಎಲ್ 79 ಐಟಿಐ 2021, ದಿನಾಂಕ: 18.05.2023.
5. ಸರ್ಕಾರದ ಆದೇಶ ಸಂಖ್ಯೆ:MWD-LMR/2/2024,(Part-5), ದಿನಾಂಕ:16.03.2024 ಮತ್ತು ತಿದ್ದುಪಡಿ ದಿನಾಂಕ:18.03.2024.
6. ಸರ್ಕಾರದ ಆದೇಶ ಸಂಖ್ಯೆ:ಇಡಿ 226 ಮಾಹಿತಿ 2018, ದಿನಾಂಕ: 05.11.2018.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಿಂದ (4) ರವರೆಗಿನ ಸರ್ಕಾರದ ಆದೇಶಗಳಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗಳು ಸರ್ಕಾರದ ನಿಯಮ/ಆದೇಶಗಳಿಗನುಸಾರ ರಾಜ್ಯದಲ್ಲಿನ ಅಲ್ಪಸಂಖ್ಯಾತರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತ ಶೈಕ್ಷಣಿಕ ಸಂಸ್ಥೆಗಳನ್ನಾಗಿ ಘೋಷಿಸಲು ಈ ಕೆಳಕಂಡಂತೆ ಷರತ್ತುಗಳನ್ನು ವಿಧಿಸಿ ಅನುಷ್ಠಾನಗೊಳಿಸುತ್ತಿವೆ.

| ಇಲಾಖೆಗಳು | ಮಾನದಂಡಗಳು |
|---|---|
| 1.**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.**<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 27 ಮಾಹಿತಿ 2012 (ಭಾಗ-1), ದಿನಾಂಕ:18.06.2014. | 1. ಶಾಲೆ ಆಡಳಿತ ಮಂಡಳಿಯ ಸದಸ್ಯರು ಕಾರ್ಯಕಾರಿ ಸಮಿತಿಯಲ್ಲಿದ್ದು, ಆಯಾಯ ಭಾಷಾ/ಮತೀಯಾ ಅಲ್ಪಸಂಖ್ಯಾತ ಸದಸ್ಯರ ಸಂಖ್ಯೆ ಕನಿಷ್ಠ ಮೂರನೇ ಎರಡರಷ್ಟು ಇರಬೇಕು.<br>2.ಅಲ್ಪಸಂಖ್ಯಾತ ಸಂಸ್ಥೆ ಶಾಲೆಗಳೆಂದು ಘೋಷಿಸಲು ಆ ಶಾಲೆಗಳು ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇ.25 ರಷ್ಟು ಆಯಾ ಭಾಷಾ/ಆಯಾ ಮತೀಯ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರಬೇಕು. |
| 2.**ಉನ್ನತ ಶಿಕ್ಷಣ ಇಲಾಖೆ.**<br>ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ಕಾಲೇಜು ಶಿಕ್ಷಣ) ನಿಯಮಗಳು 2014.<br>(ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 156 ಯುಪಿಸಿ 2013,ದಿನಾಂಕ:30.07.2014) | 1. At least two-third of the trustees and members of the managing committee of the society, of the collegiate education institute shall belong to the minority community [Rule-4(5)]<br>2. Out of the total intake not less than fifty percent enrolled in the said collegiate education institution shall belong to the said minority community belonging to the state of Karnataka. [Rule-4(6)}. |

Scanned with OKEN Scanner

| | |
|---|---|
| 3.**ತಾಂತ್ರಿಕ ಶಿಕ್ಷಣ ಇಲಾಖೆ.**<br>ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ತಾಂತ್ರಿಕ ಶಿಕ್ಷಣ) ನಿಯಮಗಳು 2014.<br><br>(ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 131 ಟಿಪಿಇ 2014 ದಿನಾಂಕ: 20.08.2014) | 1. At least two-third of the trustees or members of the managing committee of the society, of the technical educational institution shall belong to the minority. [Rule-4(5)]<br><br>2. Not less than Fifty percent of the children enrolled in the said institution shall belong to said Minority Community to which applicant the institution belongs to, out of which at least Seventy Five percent of student shall be from Karnataka. [Rule-4(6)] |
| 4. **ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.**<br>ಕರ್ನಾಟಕ ಕೈಗಾರಿಕ ತರಬೇತಿ ಸಂಸ್ಥೆ (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ತಾಂತ್ರಿಕ ಶಿಕ್ಷಣ) ನಿಯಮಗಳು 2023.<br><br>(ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್‌ಡಿಇಎಲ್ 79 ಐಟಿಎ 2021, ದಿನಾಂಕ: 18.05.2023.) | 1. At least two-third of the trustees or members of the managing committee of the society, of the Industrial Training Institution shall belong to the Minority. [Rule-4(5)]<br><br>2. Not less than Fifty percent of the children enrolled in the said institution shall belong to said Minority Community to which applicant the institution belongs to, out of which at least Seventy Five percent of student shall be from Karnataka. [Rule-4(6)] |

ಮೇಲೆ ಓದಲಾದ ಕ್ರ.ಸಂ.(5)ರ ಸರ್ಕಾರಿ ಆದೇಶ ಹಾಗೂ ತಿದ್ದುಪಡಿಯಲ್ಲಿ, ರಾಜ್ಯದಲ್ಲಿ ಮತೀಯ ಅಲ್ಪಸಂಖ್ಯಾತ ಸಮುದಾಯದವರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಮತೀಯ (Religious Minority) ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಯೆಂದು ಘೋಷಿಸಲು ಇರುವ ನಿಯಮ ಆದೇಶಗಳಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಗಳ ರಾಷ್ಟ್ರೀಯ ಆಯೋಗದ ಮಾರ್ಗಸೂಚಿಗೊಳಪಟ್ಟು ಆಯಾ ಶೈಕ್ಷಣಿಕ ಸಂಸ್ಥೆಗಳು ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇಕಡ ಇಂತಿಷ್ಟು ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರತಕ್ಕದ್ದು ಎಂಬ ಷರತ್ತನ್ನು ರದ್ದುಪಡಿಸಿ ಆದೇಶಿಸಲಾಗಿರುತ್ತದೆ.

ಮೇಲ್ಕಂಡಂತೆ ರದ್ದುಪಡಿಸಲಾಗಿರುವ ಆದೇಶವನ್ನು ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಿಗೂ ಸಹ ಅನ್ವಯಿಸಿ ಸೂಕ್ತ ಆದೇಶ ಹೊರಡಿಸುವಂತೆ ಶ್ರೀ ಪುಟ್ಟಣ್ಣ, ಮಾನ್ಯ ವಿಧಾನ ಪರಿಷತ್ ಸದಸ್ಯರು (ಬೆಂಗಳೂರು ಶಿಕ್ಷಕರ ಕ್ಷೇತ್ರ) ಇವರು ಸರ್ಕಾರಕ್ಕೆ ದಿನಾಂಕ:14.06.2024ರ ಮನವಿಯಲ್ಲಿ ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(6)ರ ಸರ್ಕಾರಿ ಆದೇಶದಲ್ಲಿ ಜಸ್ಟೀಸ್ ರಂಗನಾಥ ಮಿಶ್ರ, ನಿವೃತ್ತ ಮುಖ್ಯ ನ್ಯಾಯಮೂರ್ತಿಗಳು ಹಾಗೂ ಅಧ್ಯಕ್ಷರು, ಮತೀಯ ಮತ್ತು ಭಾಷಾ ಅಲ್ಪಸಂಖ್ಯಾತರ ಆಯೋಗ, ಭಾರತ ಸರ್ಕಾರ ಇವರು ದಿನಾಂಕ:10.05.2007 ರಲ್ಲಿ ನೀಡಿರುವ ವರದಿಯಲ್ಲಿ ಉಲ್ಲೇಖಿಸಲಾಗಿರುವ ಉರ್ದು, ತೆಲಗು, ತಮಿಳು, ಮಲಯಾಳಂ, ಮರಾಠಿ, ತುಳು, ಲಮಾಣಿ, ಹಿಂದಿ, ಕೊಂಕಣಿ ಮತ್ತು ಗುಜರಾತಿ ಒಟ್ಟು 10 ಭಾಷೆಗಳನ್ನು ಅಲ್ಪಸಂಖ್ಯಾತ ಭಾಷೆಗಳೆಂದು ಅಧಿಸೂಚಿಸಿ ಆದೇಶಿಸಲಾಗಿರುತ್ತದೆ. ಈ ಆದೇಶವು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಸಂಬಂಧಿಸಿದ ಅಲ್ಪಸಂಖ್ಯಾತ ಭಾಷಾ ಶಾಲೆಗಳನ್ನು ಘೋಷಣೆ ಮಾಡುವ

Scanned with OKEN Scanner

ಉದ್ದೇಶಕ್ಕೆ ಮಾತ್ರ ಸೀಮಿತವಾಗಿದ್ದು, ಇನ್ನುಳಿದಂತೆ ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ), ಕೌಶಾಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಬರುವ ಶೈಕ್ಷಣಿಕ ಸಂಸ್ಥೆಗಳಿಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಅಲ್ಪಸಂಖ್ಯಾತ ಭಾಷೆಗಳನ್ನು ಗುರುತಿಸಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಕ್ರ.ಸಂ. (5)ರ ಸರ್ಕಾರಿ ಆದೇಶ ಹಾಗೂ ತಿದ್ದುಪಡಿಯಲ್ಲಿ ರದ್ದುಪಡಿಸಲಾಗಿರುವ ಷರತ್ತನ್ನು ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಸಂಬಂಧಿಸಿದ ಭಾಷಾ ಅಲ್ಪಸಂಖ್ಯಾತ (Linguistic Minority) ಸಮುದಾಯದ ಶೈಕ್ಷಣಿಕ ಸಂಸ್ಥೆಗಳಿಗೂ ಸಹ ಅನ್ವಯಿಸಿ ಆದೇಶ ಹೊರಡಿಸುವ ಪ್ರಸ್ತಾವನೆಯನ್ನು ಸಚಿವ ಸಂಪುಟದ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ದಿನಾಂಕ:20.02.2025 ರಂದು ನಡೆದ ಸಚಿವ ಸಂಪುಟದ ಪ್ರಕರಣ ಸಂಖ್ಯೆ:ಸಿ.134/2025ರಲ್ಲಿ ಸದರಿ ಪ್ರಸ್ತಾವನೆಯನ್ನು ಸಚಿವ ಸಂಪುಟವು ಅನುಮೋದಿಸಿರುತ್ತದೆ.

ಆದ್ದರಿಂದ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: MWD-LMR/34/2024, ಬೆಂಗಳೂರು,</u>**
**<u>ದಿನಾಂಕ:01.03.2025</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಮತೀಯ ಅಲ್ಪಸಂಖ್ಯಾತ (Religious Minority) ಸಮುದಾಯದವರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಮತೀಯ ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಯೆಂದು ಘೋಷಿಸಲು ಇರುವ ನಿಯಮ/ಆದೇಶಗಳಲ್ಲಿ, ಆ ಶೈಕ್ಷಣಿಕ ಸಂಸ್ಥೆಗಳು ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇಕಡ ಇಂತಿಷ್ಟು ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರತಕ್ಕದ್ದು ಎಂಬ ಷರತ್ತನ್ನು ರದ್ದುಪಡಿಸಿರುವ ಸರ್ಕಾರದ ಆದೇಶ ಸಂಖ್ಯೆ:MWD-LMR/2/2024 (Part-5), ದಿನಾಂಕ:16.03.2024 ಮತ್ತು ತಿದ್ದುಪಡಿ ದಿನಾಂಕ: 18.03.2024ನ್ನು ರಾಜ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಸಂಬಂಧಿಸಿದ ಭಾಷಾ ಅಲ್ಪಸಂಖ್ಯಾತ (Linguistic Minority) ಸಮುದಾಯದ ಶೈಕ್ಷಣಿಕ ಸಂಸ್ಥೆಗಳಿಗೂ ಸಹ ಅನ್ವಯಿಸಿ ಆದೇಶಿಸಿದೆ.

ಈ ಬಗ್ಗೆ ಸಂಬಂಧಪಟ್ಟ ನಿಯಮ/ಆದೇಶಗಳಿಗೆ ಸೂಕ್ತ ತಿದ್ದುಪಡಿ ಮಾಡಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ದಿನಾಂಕ:20.02.2025 ರಂದು ನಡೆದ ಸಚಿವ ಸಂಪುಟದ ಪ್ರಕರಣ ಸಂಖ್ಯೆ:ಸಿ.134/2025ರಲ್ಲಿ ನೀಡಿರುವ ಅನುಮೋದನೆಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್. ಎಜಾಸ್ ಪಾಷ) 01/03/2025
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ

ಗೆ,

1. ಪ್ರಧಾನ ಮಹಾಲೇಖಪಾಲರು (ಅ ಮತ್ತು ಇ)(ಲೆಕ್ಕ ಪರಿಶೋಧನೆ-1) ಕರ್ನಾಟಕ, ಬೆಂಗಳೂರು.
2. ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.

Scanned with OKEN Scanner

3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು.
6. ಸರ್ಕಾರದ ಅಪರ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ.
7. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ, ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
9. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
10. ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
11. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆರವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು
13. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

Scanned with OKEN Scanner